**1 ನೇ ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಸಾಗರ**

**ಸಿಸಿ ನಂಬರು 166-2023**

**ಸಿ.ಡಬ್ಲ್ಯು -6, ಪಿ.ಡಬ್ಲ್ಯು -5**

**ಸಾಕ್ಷಿದಾರರ ಹೆಸರು** : ರಘುನಾಥ್ ಸಿ.ಎಸ್.
ತಂದೆಯ **ಹೆಸರು** : ಸಿ. ಸ್ವಾಮಿ
**ವಯಸ್ಸು** : 53 ವರ್ಷ
**ಉದ್ಯೋಗ** : ಖಾಸಗಿ ನೌಕರಿ
**ವಾಸ** : ಎಸ್.ಎನ್. ನಗರ, ಸಾಗರ.

**ಪ್ರಮಾಣೀಕರಿಸಿದ** ದಿನಾಂಕ : **13.07.2026.**

**ಮುಖ್ಯ ವಿಚಾರಣೆ : ಸಸಅ ರಿಂದ**

1. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆಯನ್ನು ಮತ್ತು ಮರುಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ದಂಡ ಪ್ರಕ್ರಿಯಾ ಸಂಹಿತೆ ಕಲಂ 161 ರ ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

ಪಾಟೀ ಸವಾಲುಃ- ಸ.ಸ.ಅ. ರವರಿಂದಃ-

1. ಈಗ ಓದಿ ಹೇಳಿದಂತೆ ದಿಃ26.04.2020 ರಂದು ಪೊಲೀಸರ ಮುಂದೆ ಹೇಳಿಕೆಯನ್ನು ಹಾಗೂ ದಿಃ12.08.2021 ರಂದು ಮರುಹೇಳಿಕೆಯನ್ನು ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಪೊಲೀಸರ ಮುಂದೆ ನೀಡಿದ ಹೇಳಿಕೆ ಮತ್ತು ಮರುಹೇಳಿಕೆ ಗೆ ವ್ಯತಿರಿಕ್ತವಾಗಿ ಸಾಕ್ಷ್ಯವನ್ನು ನುಡಿದಿದ್ದರಿಂದ ಹೇಳಿಕೆ ಮತ್ತು ಮರು ಹೇಳಿಕೆಯನ್ನು ನಿಪಿ 12 ಮತ್ತು 13 ಎಂದು ಗುರುತಿಸಲಾಯಿತು. ಎಲ್ಲಾ ವಿಷಯ ಗೊತ್ತಿದ್ದರೂ ಆರೋಪಿಗೆ ಸಹಾಯವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.

ಮರು ವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**

**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.